ಕರ್ನಾಟಕ ಸರ್ಕಾರ (ಸಿ.ಆರ್.ಪಿ. 67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ. ಸಂಖ್ಯೆ 57)<br>ನಮೂನೆ ಸಂಖ್ಯೆ 4<br>(ಸಿವಿಲ್) |

ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ. ಹಳಿಯಾಳ
ಇವರ ನ್ಯಾಯಾಲಯದಲ್ಲಿ.

ಸಿ.ಸಿ. ನಂ.: 305/2020

.....................................................................

CW 08
PW 05

| | | |
|---|---|---|
| ಹೆಸರು | : | ಅಹಮ್ಮದ್ ಸಾಬ್ ಮುಜಾವರ |
| ತಂದೆಯ ಹೆಸರು | : | ಹುಸೇನಸಾಬ |
| ವಯಸ್ಸು | : | 34 ವರ್ಷ |
| ಉದ್ಯೋಗ | : | ರೈತಾಪಿ ಕೆಲಸ |
| ವಾಸಸ್ಥಳ | : | ಅಡಿಕೆಹೊಸುರು. |

ದಿನಾಂಕ 06-01-2026 ರಂದು ಸತ್ಯಪ್ರತಿಜ್ಞೆ ಮೇಲೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :

ಚಾಸಾ 1 ನನ್ನ ಮಾವ. ಚಾಸಾ 3, 7 ರವರು ಪರಿಚಯ ಇದ್ದಾರೆ. ಉಳಿದವರು ಪರಿಚಯ ಇರುವುದಿಲ್ಲ. ಆರೋಪಿಯನ್ನು ಈ ಹಿಂದೆ ನೋಡಿಲ್ಲ.

ಸುಮಾರು 5-6 ವರ್ಷಗಳ ಹಿಂದೆ ಕೆಸರೊಳ್ಳಿ ಗೋರಿಖಾನ್ ಪೆಟ್ರೋಲ್ ಪಂಪ್ ಹತ್ತಿರ ಅಪಘಾತ ಮೋಟಾರ ಸೈಕಲ್ ಮತ್ತು ಬಸ್ಸಿನ ನಡುವೆ ಆಗಿತ್ತು ಎಂದು ನಮಗೆ ಫೋನ್ ಮಾಡಿ ತಿಳಿಸಿದರು. ಮೋಟಾರ ಸೈಕಲ್ ನಲ್ಲಿ ಇದ್ದ ಹುಡುಗರು ತಟ್ಟಿಗೇರಾದವರು. ನಂತರ ನಾನು ಮತ್ತು ಚಾಸಾ 7 ರವರು ಹಳಿಯಾಳ ಸರ್ಕಾರಿ ಆಸ್ಪತ್ರೆಗೆ ಬಂದೆವು. ಅಪಘಾತವಾದವರನ್ನು ನೋಡಿದಾಗ ಅವರು ಮರಣ ಹೊಂದಿದ್ದರು. ಆಸ್ಪತ್ರೆಯಲ್ಲಿ ನಾವು ಶವ ಪಂಚನಾಮೆ ಆಗುವವರೆಗೆ ಇದ್ದೆ. ಹೇಗೆ ಅಪಘಾತ ಆಯಿತು ಎಂದು ನಾನು ವಿಚಾರಣೆ ಮಾಡಿಲ್ಲ, ಅಪಘಾತದಲ್ಲಿ ಗಾಯಗೊಂಡವರು ಯಾರು ಎಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ ನಿಪಿ 1 ಅನ್ನು ತೋರಿಸಲಾಗಿ ಸದರಿ ಅಪಘಾತವನ್ನು ನಾನು ನೋಡಿಲ್ಲ ಎನ್ನುತ್ತಾರೆ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಸಾಕ್ಷ್ಯ ಹಾಗೂ ಪ್ರಕರಣದ ಇತರ ಅಂಶಗಳನ್ನು ಗಮನಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು ).

**ಪಾಟೀ ಸವಾಲು : ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.**

ದಿನಾಂಕ 24-01-2020 ರಂದು ಪೊಲೀಸರಿಗೆ ಹೇಳಿಕೆ ನೀಡಿ ಅದರಲ್ಲಿ " ದಿನಾಂಕ 24-01-2020 ರಂದು ಬೆಳಗ್ಗೆ ------------- ದೂರು ನೀಡಿದ್ದು ಇರುತ್ತದೆ" ಎಂದು ನುಡಿದಿರುತ್ತೀರಿ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು **ನಿಪಿ 11 ಎಂದು** ಗುರುತಿಸಲಾಯಿತು. ಅಪಘಾತದ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಮತ್ತು ಅಪಘಾತವನ್ನು ಕಣ್ಣಾರೆ ನೋಡಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿತರ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂ., ಹಳಿಯಾಳ.